**All India Radio: Bangalore**
**National Bulletin In Kannada**
**10.09.2026 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**10.09.2026 07.35 a.m.**

**<><><><>**

ಮುಖ್ಯಾಂಶಗಳು

1. ಒಂಬತ್ತು ರಾಜ್ಯಗಳಲ್ಲಿ ೨೦ ಸಾವಿರದ ೮೦೦ ಕೋಟಿ ರೂಪಾಯಿ ಮೌಲ್ಯದ ಎಂಟು ರೈಲ್ವೆ ಮಲ್ಟಿಟ್ರ್ಯಾಕಿಂಗ್ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
2. ಮಹಿಳಾ ನೇತೃತ್ವದ ಉದ್ಯಮಗಳಿಗೆ ಅವಕಾಶ ವಿಸ್ತರಿಸಲು ಬ್ರಿಕ್ಸ್ ದೇಶಗಳು ಒಟ್ಟಾಗಿ ಕೆಲಸ ಮಾಡುವಂತೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ಕರೆ
3. ನವದೆಹಲಿಯಲ್ಲಿ ಇಂದಿನಿಂದ ಮೂರು ದಿನಗಳ ಜಾಗತಿಕ ಒಣಭೂಮಿ ಕೃಷಿ ಸಮಾವೇಶ
4. ಜೂನಿಯರ್ ಹಾಕಿ ಏಷ್ಯಾ ಕಪ್: ಸೆಮಿಫೈನಲ್ ಪ್ರವೇಶಿಸಿದ ಭಾರತ ಪುರುಷರ ತಂಡ

<><><><>

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯು ಒಂಬತ್ತು ರಾಜ್ಯಗಳಲ್ಲಿ ೨೦ ಸಾವಿರದ ೮೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಎಂಟು ರೈಲ್ವೆ ಮಲ್ಟಿಟ್ರ್ಯಾಕಿಂಗ್ ಯೋಜನೆಗಳಿಗೆ ಅನುಮೋದನೆ ನೀಡಿದೆ. ಈ ಯೋಜನೆಗಳು ರೈಲು ಸಂಪರ್ಕವನ್ನು ಸುಧಾರಿಸುವ, ಅಸ್ತಿತ್ವದಲ್ಲಿರುವ ಮಾರ್ಗಗಳಲ್ಲಿನ ದಟ್ಟಣೆಯನ್ನು ಕಡಿಮೆ ಮಾಡುವ ಮತ್ತು ಪ್ರಯಾಣಿಕರು ಹಾಗೂ ಸರಕು ಸಾಗಣೆಯಲ್ಲಿ ವೇಗ ನೀಡುವ ನಿರೀಕ್ಷೆಯಿದೆ. ಇವುಗಳನ್ನು ೨೦೨೯-೩೦ರ ವೇಳೆಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ನವದೆಹಲಿಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಪೈಕಿ ಕೆಲವು ಯೋಜನೆಗಳು ಪಶ್ಚಿಮ ಬಂಗಾಳ, ಜಾರ್ಖಂಡ್, ಒಡಿಶಾ, ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢದಾದ್ಯಂತ ೧೪ ಜಿಲ್ಲೆಗಳನ್ನು ಒಳಗೊಂಡಿದ್ದು, ಭಾರತೀಯ ರೈಲ್ವೆಯ ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು ೬೫೬ ಕಿಲೋಮೀಟರ್‌ಗಳಷ್ಟು ಹೆಚ್ಚಿಸಲಿದೆ ಎಂದು ತಿಳಿಸಿದ್ದಾರೆ. ಈ ಯೋಜನೆಗಳಲ್ಲಿ ಖರಗ್‌ಪುರದಿಂದ ಜಾರ್ಸುಗುಡಾ ನಾಲ್ಕನೇ ಮಾರ್ಗ, ಕಟ್ನಿಯಿಂದ ಪೆಂಡ್ರಾ ರಸ್ತೆಯ ನಾಲ್ಕನೇ ಮಾರ್ಗ ಮತ್ತು ಬಿಲಾಸ್‌ಪುರದಿಂದ ಪೆಂಡ್ರಾ ರಸ್ತೆಯ ಮೂರನೇ ಮಾರ್ಗ ಸೇರಿವೆ ಎಂದು ಹೇಳಿದ್ದಾರೆ.

ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ಮತ್ತು ತೆಲಂಗಾಣ ರಾಜ್ಯಗಳಾದ್ಯಂತ ೧೭ ಜಿಲ್ಲೆಗಳನ್ನು ಒಳಗೊಂಡ ಐದು ಮಲ್ಟಿಟ್ರ್ಯಾಕಿಂಗ್ ಯೋಜನೆಗಳನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಇದು ಭಾರತೀಯ ರೈಲ್ವೆಯ ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು ೫೪೦ ಕಿಲೋಮೀಟರ್‌ಗಳಷ್ಟು ಹೆಚ್ಚಿಸುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಯೋಜನೆಗಳ ಒಟ್ಟು ಅಂದಾಜು ವೆಚ್ಚ ೧೦ ಸಾವಿರದ ೨೧ ಕೋಟಿಗಿಂತ ಹೆಚ್ಚಿದ್ದು, ಅವುಗಳನ್ನು ೨೦೨೯-೩೦ ರವರೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಈ ಮಾರ್ಗಗಳಲ್ಲಿ ವೈಟ್‌ಫೀಲ್ಡ್ ನಿಂದ ಬಂಗಾರಪೇಟೆ ಮೂರನೇ ಮಾರ್ಗ, ಅರಕ್ಕೋಣಂ ನಿಂದ ರೇಣಿಗುಂಟ ಮೂರನೇ ಮತ್ತು ನಾಲ್ಕನೇ ಮಾರ್ಗ ಮತ್ತು ಹೊಸೂರು ನಿಂದ ಓಮಲೂರು ಮಾರ್ಗದ ದ್ವಿಗುಣಗೊಳಿಸುವಿಕೆ ಸೇರಿವೆ. ಅನುಮೋದಿತ ಮಲ್ಟಿ-ಟ್ರ್ಯಾಕಿಂಗ್ ಯೋಜನೆಗಳು ಸುಮಾರು ೫೨ ಲಕ್ಷ ಜನಸಂಖ್ಯೆಯನ್ನು ಹೊಂದಿರುವ ಸುಮಾರು ಎರಡು ಸಾವಿರದ ನೂರು ಹಳ್ಳಿಗಳಿಗೆ ಸಂಪರ್ಕ ಹೆಚ್ಚಿಸುತ್ತವೆ ಎಂದು ಸಚಿವ ಅಶ್ವಿನಿ ವೈಷ್ಣವ್ ವಿವರಿಸಿದ್ದಾರೆ. ಕೇಂದ್ರ ಸಚಿವ ಸಂಪುಟ ನಾಲ್ಕು ಪಥಗಳ ರೈಲು ಮಾರ್ಗಗಳಿಗೆ ಅನುಮೋದನೆ ನೀಡಿದೆ. ಇವುಗಳಲ್ಲಿ ದೆಹಲಿಯಿಂದ ಮುಂಬೈ, ಮುಂಬೈನಿಂದ ಚೆನ್ನೈ, ಚೆನ್ನೈನಿಂದ ಕೋಲ್ಕತ್ತಾ ಮತ್ತು ಕೋಲ್ಕತ್ತಾದಿಂದ ದೆಹಲಿವರೆಗಿನ ಯೋಜನೆಗಳು ಸೇರಿವೆ. ಈ ಮಾರ್ಗಗಳು ೧೧ ಸಾವಿರ ಕಿಲೋಮೀಟರ್ ರೈಲ್ವೆ ಜಾಲಗಳನ್ನು ಒಳಗೊಂಡಿವೆ ಮತ್ತು ಎರಡು ಸಾವಿರ ಕಿಲೋಮೀಟರ್‌ಗಳ ನಾಲ್ಕು ಲೈನಿಂಗ್ ಪೂರ್ಣಗೊಂಡಿದೆ. ನಾಲ್ಕು ಲೈನಿಂಗ್‌ಗಾಗಿ ಈ ಅನುಮೋದಿತ ಯೋಜನೆಗಳು ಹೆಚ್ಚಿನ ಸಾಂದ್ರತೆಯ ರೈಲ್ವೆ ಜಾಲಗಳಿಗೆ ಸಂಬಂಧಿಸಿವೆ ಎಂದು ಅವರು ತಿಳಿಸಿದ್ದಾರೆ.

<><><><>

ಅಂತಾರಾಷ್ಟ್ರೀಯ ವ್ಯಾಪಾರದಲ್ಲಿ ಮಹಿಳಾ ಉದ್ಯಮಿಗಳು ಮತ್ತು ಮಹಿಳಾ ನೇತೃತ್ವದ ಉದ್ಯಮಗಳಿಗೆ ಅವಕಾಶ ವಿಸ್ತರಿಸಲು ಬ್ರಿಕ್ಸ್ ದೇಶಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಡೆದ ಬ್ರಿಕ್ಸ್ ಡಬ್ಲ್ಯೂಬಿಎ ಮಹಿಳಾ ನೇತೃತ್ವದ ಅಭಿವೃದ್ಧಿ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಮಹಿಳಾ ನೇತೃತ್ವದ ಉದ್ಯಮಗಳ ಬೆಳವಣಿಗೆ ಮತ್ತು ಅವಕಾಶಗಳನ್ನು ಬಳಸಿಕೊಳ್ಳಲು ಸಾಲ, ಮಾರುಕಟ್ಟೆಗಳು ಮತ್ತು ಊಹಿಸಬಹುದಾದ ವ್ಯವಹಾರ ನಿಯಮಗಳಿಗೆ ಸುಲಭ ಪ್ರವೇಶದ ಅಗತ್ಯವನ್ನು ಒತ್ತಿ ಹೇಳಿದರು. ಭಾರತ, ಮಹಿಳೆಯರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ಶಿಕ್ಷಣ, ಕೌಶಲ್ಯ ಹಾಗೂ ಸುಧಾರಿತ ಜೀವನದ ಗುಣಮಟ್ಟದ ಮೂಲಕ

ಸಬಲೀಕರಣಗೊಳಿಸುವತ್ತ ಗಮನಹರಿಸಿದೆ. ಭಾರತ, ಸುಮಾರು ಮುನ್ನೂರು ಮಿಲಿಯನ್ ಮಹಿಳಾ ಬ್ಯಾಂಕ್ ಖಾತೆದಾರರನ್ನು ಹೊಂದಿದೆ ಮತ್ತು ತಮ್ಮದೇ ಆದ ಕೆಲಸ ಪ್ರಾರಂಭಿಸಲು ಬಯಸುವ ಮಹಿಳೆಯರಿಗೆ ಮೇಲಾಧಾರ-ಮುಕ್ತ ಸಾಲ ಒದಗಿಸುತ್ತದೆ ಎಂದು ಸಚಿವ ಪಿಯೂಷ್ ಗೋಯಲ್ ತಿಳಿಸಿದರು. ಸುಮಾರು ಒಂದು ನೂರು ಮಿಲಿಯನ್ ಗ್ರಾಮೀಣ ಮಹಿಳೆಯರು ಈಗ ಒಂಬತ್ತು ಮಿಲಿಯನ್‌ಗಿಂತಲೂ ಹೆಚ್ಚು ಸ್ವ-ಸಹಾಯ ಗುಂಪುಗಳ ಸದಸ್ಯರಾಗಿದ್ದಾರೆ. ಸಣ್ಣ ಸಹಕಾರಿ ಸಂಸ್ಥೆಗಳು ಅಥವಾ ಮಹಿಳೆಯರ ಗುಂಪುಗಳು, 'ಲಖ್‌ಪತಿ ದೀದಿ' ಉಪಕ್ರಮದ ಅಡಿಯಲ್ಲಿ ವಿವಿಧ ಉದ್ಯಮಗಳಲ್ಲಿ ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

<><><>

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ನವದೆಹಲಿಯಲ್ಲಿ ನಡೆಯಲಿರುವ ಮೂರು ದಿನಗಳ ಜಾಗತಿಕ ಒಣಭೂಮಿ ಕೃಷಿ ಸಮಾವೇಶ ೨೦೨೬ ಉದ್ದೇಶಿಸಿ ಮಾತನಾಡಲಿದ್ದಾರೆ. ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಅರೆ-ಶುಷ್ಕ ಉಷ್ಣವಲಯಗಳ ಅಂತಾರಾಷ್ಟ್ರೀಯ ಬೆಳೆಗಳ ಸಂಶೋಧನಾ ಸಂಸ್ಥೆ ಜಂಟಿಯಾಗಿ ಆಯೋಜಿಸಿರುವ ಈ ಸಮಾವೇಶ 'ದಕ್ಷಿಣ ರಾಷ್ಟ್ರಗಳ ಸಹಕಾರದೊಂದಿಗೆ ಒಣಭೂಮಿ ಕೃಷಿಯ ಪರಿವರ್ತನೆ' ಎಂಬ ವಿಷಯವನ್ನು ಆಧರಿಸಿದೆ. ರಾಷ್ಟ್ರೀಯ ಕೃಷಿ ವಿಜ್ಞಾನ ಸಂಕೀರ್ಣದಲ್ಲಿ ನಡೆಯಲಿರುವ ಈ ಸಮಾವೇಶ, ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಅರೆ-ಶುಷ್ಕ ಉಷ್ಣವಲಯಗಳ ಅಂತಾರಾಷ್ಟ್ರೀಯ ಬೆಳೆಗಳ ಸಂಶೋಧನಾ ಸಂಸ್ಥೆಗಳ ನಡುವಿನ ೫೦ ವರ್ಷಗಳ ಸಹಭಾಗಿತ್ವದ ಮೈಲಿಗಲ್ಲನ್ನು ಆಚರಿಸಲಿದೆ. ಏಷ್ಯಾ, ಆಫ್ರಿಕಾ ಮತ್ತು ಅಮೆರಿಕ ಖಂಡಗಳ ೮೦೦ಕ್ಕೂ ಹೆಚ್ಚು ವಿಜ್ಞಾನಿಗಳು, ನೀತಿ ನಿರೂಪಕರು, ರೈತ ಪ್ರತಿನಿಧಿಗಳು ಹಾಗೂ ಅಭಿವೃದ್ಧಿ ಪಾಲುದಾರರು ಆರು ಪ್ರಮುಖ ವಿಷಯಗಳ ಕುರಿತು ಚರ್ಚಿಸಲಿದ್ದಾರೆ.

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಕೃಷ್ಣನ್ ಅವರ ಆಹ್ವಾನದ ಮೇರೆಗೆ ನಿಜಾರಿ ಇಸ್ಮೈಲಿಗಳ ೫೦ನೇ ಇಮಾಮ್ ರಾಜಕುಮಾರ ೫ನೇ ರಹೀಮ್ ಅಗಾ ಖಾನ್ ಭಾರತಕ್ಕೆ ಭೇಟಿ ನೀಡಿದ್ದಾರೆ. ನವದೆಹಲಿಗೆ ಆಗಮಿಸಿದ ಅವರನ್ನು ಭಾರತೀಯ ನಿಯೋಗ ಸ್ವಾಗತಿಸಿತು. ಅವರು ಇಂದು ಉಪರಾಷ್ಟ್ರಪತಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ನವದೆಹಲಿಯಲ್ಲಿ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿ ಮಾಡಲಿದ್ದಾರೆ. ಭಾರತ ಭೇಟಿಯ ಭಾಗವಾಗಿ ಅಗಾ ಖಾನ್ ಅವರು ಅಹಮದಾಬಾದ್, ಮುಂಬೈ ಮತ್ತು ಹೈದರಾಬಾದ್‌ಗೆ ಭೇಟಿ ನೀಡಲಿದ್ದಾರೆ. ಇಸ್ಮೈಲಿ ಸುಮುದಾಯದ ೫೦ನೇ ಇಮಾಮ್ ಆಗಿ ಅಧಿಕಾರ ವಹಿಸಿಕೊಂಡ ನಂತರ ರಾಜಕುಮಾರ ೫ನೇ ರಹೀಮ್ ಅಗಾ ಖಾನ್, ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಅಭಿವೃದ್ಧಿಯ ಪಯಣದಲ್ಲಿ ನಾವೀನ್ಯತೆ, ಸಂಶೋಧನೆ, ತಂತ್ರಜ್ಞಾನ ಮತ್ತು ಉದ್ಯಮಶೀಲತೆಗೆ ಸದಾ ಆದ್ಯತೆ ನೀಡಿದ್ದಾರೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಭಾರತ್ ಇನ್ನೋವೇಟ್ಸ್ ೨೦೨೬ ಸ್ಮರಣ ಸಂಚಿಕೆ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಯುವ ನಾವೀನ್ಯಕಾರರನ್ನು ಜಾಗತಿಕ ಅವಕಾಶಗಳು, ಉದ್ಯಮ ಮತ್ತು ಜಾಲತಾಣಗಳೊಂದಿಗೆ ಸಂಪರ್ಕಿಸುವಲ್ಲಿ ಭಾರತ್ ಇನ್ನೋವೇಟ್ಸ್ ಪ್ರಮುಖ ಪಾತ್ರ ವಹಿಸುತ್ತಿದೆ ಎಂದರು. ಫ್ರಾನ್ಸ್‌ನ ನೈಸ್‌ನಲ್ಲಿ ಜೂನ್ ೧೪ರಿಂದ ೧೬ರವರೆಗೆ ನಡೆದ ಮೊದಲ ಭಾರತ್ ಇನ್ನೋವೇಟ್ಸ್ ಕಾರ್ಯಕ್ರಮದ ವಿವರಗಳನ್ನು ಸ್ಮರಣ ಸಂಚಿಕೆ ಒಳಗೊಂಡಿದೆ. ಉನ್ನತ ಶಿಕ್ಷಣ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಬೆಳೆಯುತ್ತಿರುವ ಸಾಮರ್ಥ್ಯವುಳ್ಳ ಆಳ ತಂತ್ರಜ್ಞಾನ ಆವಿಷ್ಕಾರಗಳನ್ನು ಗುರುತಿಸಿ, ಪೋಷಿಸುವುದು ಈ ಉಪಕ್ರಮದ ಉದ್ದೇಶವಾಗಿದೆ.

<><><>

ಚೀನಾದ ಶೆನ್ಜೆನ್ ನಗರದಲ್ಲಿ ನವೆಂಬರ್‌ನಲ್ಲಿ ನಡೆಯಲಿರುವ ಏಷ್ಯಾ-ಪೆಸಿಫಿಕ್ ಆರ್ಥಿಕ ಸಹಕಾರ ಶೃಂಗಸಭೆಯಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ತ್ರಿಪಕ್ಷೀಯ ಸಭೆ ನಡೆಸುವ ವಿಚಾರದ ಕುರಿತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚರ್ಚಿಸಿದ್ದಾರೆ ಎಂದು ಕ್ರೆಮ್ಲಿನ್ ತಿಳಿಸಿದೆ. ಉಕ್ರೇನ್ ಯುದ್ಧ ಕೊನೆಗೊಳಿಸಲು ಅಮೆರಿಕ, ರಷ್ಯಾವನ್ನು ಒತ್ತಾಯಿಸುತ್ತಿರುವಾಗ ಹಾಗೂ ರಷ್ಯಾ ಮತ್ತು ಚೀನಾ ನಡುವಿನ ಸಂಬಂಧಗಳು ಗಾಢವಾಗುತ್ತಿರುವ ನಡುವೆ ಈ ಶೃಂಗಸಭೆ ನಡೆಯಲಿದೆ.

<><><>

ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರು ದೆಹಲಿ ವಿಭಾಗದ ನಿಯಂತ್ರಣ ಕಚೇರಿಗೆ ಭೇಟಿ ನೀಡಿ ರೈಲುಗಳ ಸುರಕ್ಷತೆ, ಸಂಚಾರ, ಸಮಯಪಾಲನೆ ಹಾಗೂ ಸಾರ್ವಜನಿಕರ ಕುಂದು-ಕೊರತೆಗಳ ಕುರಿತು ಪರಿಶೀಲನೆ ನಡೆಸಿದ್ದಾರೆ. ನಿಯಂತ್ರಣ ಕಚೇರಿಯ ವಿವಿಧ ವಿಭಾಗಗಳ

ಕಾರ್ಯನಿರ್ವಹಣೆ ವೀಕ್ಷಿಸಿದ ಸಚಿವರು, ಆಧುನಿಕ ಎಸ್‌ಸಿಎಡಿಎ ಕೇಂದ್ರ ಮತ್ತು ವಾರ್ ರೂಮ್‌ಗೂ ಭೇಟಿ ನೀಡಿದರು. ಈ ವೇಳೆ ಮಾತನಾಡಿದ ಸಚಿವರು, ರೈಲು ಕಾರ್ಯಾಚರಣೆ, ಸುರಕ್ಷತಾ ಮೇಲ್ವಿಚಾರಣೆ ಹಾಗೂ ನಿರ್ವಹಣೆಯಲ್ಲಿ ತಂತ್ರಜ್ಞಾನದ ಬಳಕೆಯಿಂದ ಮಾನವ ದೋಷಗಳು ಕಡಿಮೆಯಾಗಿದ್ದು, ಸುರಕ್ಷತೆ ಮತ್ತಷ್ಟು ಸುಧಾರಿಸಿದೆ ಎಂದು ತಿಳಿಸಿದರು.

<><><><>

ಚೆನ್ನಾದ ಮೊಕಿಯಲ್ಲಿ ನಡೆಯುತ್ತಿರುವ ಜೂನಿಯರ್ ಹಾಕಿ ಏಷ್ಯಾ ಕಪ್‌ನಲ್ಲಿ ಭಾರತ ಪುರುಷರ ತಂಡ ಸೆಮಿಫೈನಲ್ ಪ್ರವೇಶಿಸಿದೆ. ಕ್ವಾಟರ್ ಪೈನಲ್ ಪಂದ್ಯದಲ್ಲಿ ಚೈನೀಸ್ ತೈಪೆ ತಂಡವನ್ನು ೧೫-೦ ಅಂತರದಿಂದ ಸೋಲಿಸಿ, ಗುಂಪು 'ಎ' ವಿಭಾಗದಲ್ಲಿ ಅಗ್ರ ಸ್ಥಾನ ಪಡೆದಿದೆ. ನಾಯಕ ಅನ್ಮೋಲ್ ಎಕ್ಕಾ ೬ ಗೋಲು ಗಳಿಸಿ, ಭಾರತದ ಗೆಲುವಿನ ರೂವಾರಿಯಾದರು. ಆರ್ಯನ್ ಜೆಸ್ ಹ್ಯಾಟ್ರಿಕ್ ಗೋಲು ಗಳಿಸಿದರೆ, ಹರ್ಪಾಲ್ ಎರಡು ಗೋಲು ಗಳಿಸಿದರು. ಇದೇ ವೇಳೆ, ಚೀನಾ ತಂಡದ ವಿರುದ್ಧ ಗೋಲುರಹಿತ ಡ್ರಾ ಸಾಧಿಸಿದ ಭಾರತ ಮಹಿಳಾ ಜೂನಿಯರ್ ತಂಡ, ಕ್ವಾರ್ಟರ್ ಫೈನಲ್ ಪ್ರವೇಶಿಸಿದೆ. ಇಂದು ನಡೆಯಲಿರುವ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತ, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>